# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 842 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್.ಕೆ (ವಿಧಾನಸಭೆಯಿಂದ ಚುನಾಯಿತರಾಂದವರು) |
| ಉತ್ತರಿಸುವವರು | : | ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 12.12.2023 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸ್ತುತ ಯಾವ್ಯಾವ ಉದ್ದಿಮೆಗಳು ಸಣ್ಣ ಕೈಗಾರಿಕೆಗಳ ವ್ಯಾಪ್ತಿಗೆ ಸೇರುತ್ತವೆ; | ಭಾರತ ಸರ್ಕಾರವು ದಿನಾಂಕ 01.07.2020 ರಿಂದ ಜಾರಿಗೆ ತಂದಿರುವ ಹೊಸ ವ್ಯಾಖ್ಯಾನದ ಪ್ರಕಾರ ಯಂತ್ರೋಪಕರಣ ಮತ್ತು ಸ್ಥಾವರಗಳಲ್ಲಿ ಒಟ್ಟು ಬಂಡವಾಳ ರೂ.10.00 ಕೋಟಿ ಮೀರದಂತೆ ಹೂಡಿಕೆ ಮಾಡಿರುವ ಮತ್ತು ವಾರ್ಷಿಕ ವಹಿವಾಟು ರೂ.50.00 ಕೋಟಿ ಮೀರದಂತೆ ಇರುವ ಉತ್ಪಾದನಾ ಮತ್ತು ಸೇವಾ ಚಟುವಟಿಕೆಯ ವಲಯದ ಉದ್ಯಮಗಳನ್ನು ಸಣ್ಣ ಕೈಗಾರಿಕೆ ಎನ್ನುತ್ತಾರೆ. |
| ಆ) | ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಸರ್ಕಾರದಿಂದ ದೊರೆಯುವ ಸಾಲ, ಸಹಾಯಧನ ಮತ್ತು ಇತರೆ ಸೌಲಭ್ಯಗಳು ಯಾವುವು; | ಕರ್ನಾಟಕ ಸರ್ಕಾರವು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಅನೇಕ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿದ್ದು, ಅವು ಈ ಕೆಳಗಿನಂತಿವೆ ಮತ್ತು ಅವುಗಳಡಿಯಲ್ಲಿ ದೊರೆಯುವ ಸಾಲ, ಸಹಾಯಧನ ಮತ್ತು ಇತರೆ ಸೌಲಭ್ಯಗಳ ವಿವರಗಳು ಈ ಕೆಳಗಿನಂತಿವೆ:<br><br>1. **ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ** ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ಪಾದನಾ ಘಟಕಗಳಿಗೆ ಗರಿಷ್ಟ ಸಾಲ ರೂ.50.00 ಲಕ್ಷಗಳವರೆಗೆ ಸೇವಾ ಘಟಕಗಳಿಗೆ ರೂ.20.00 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ.15 ರಿಂದ ಶೇ.35 ರವರೆಗೆ ಗರಿಷ್ಟ ರೂ.7.50 ಲಕ್ಷದಿಂದ ರೂ.17.50 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br><br>2. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ, ಮತ್ತು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರು ಪಾವತಿ ಮಾಡಿದ ಅತೀ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇಕಡ 6 ರಂತೆ ಬಡ್ಡಿ ಸಹಾಯಧನ ನೀಡಲಾಗುವುದು.<br><br>3. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿಯಲ್ಲಿ ಶೇಕಡ 75 ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು ಮತ್ತು ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ. ನಿವೇಶನದ ಗರಿಷ್ಟ ವಿಸ್ತೀರ್ಣ 2 ಎಕರೆಗಳು.<br><br>4. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿಯಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕಿನಿಂದ ಸಾಲ ಒದಗಿಸಿ ಯೋಜನಾ ವೆಚ್ಚದ ಮೇಲೆ ಶೇ 60 ರಷ್ಟು ಗರಿಷ್ಟ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ. |

5. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಮೊದಲ ಪೀಳಿಗೆಯ ಉದ್ಯಮಿದಾರರು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ ಹೊಸ ಘಟಕಗಳಿಗೆ ಗರಿಷ್ಟ ರೂ.10.00 ಕೋಟಿ ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50 ರಷ್ಟು ಬಡ್ಡಿ ರಹಿತ ಗರಿಷ್ಟ ರೂ.75.00 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ.

6. ಕರ್ನಾಟಕ ರಾಜ್ಯ ಕೈಗಾರಿಕಾ ನೀತಿ 2020-25 ರಂತೆ ಕೆಳಕಾಣಿಸಿದ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ನೀಡಿ ಉತ್ತೇಜಿಸಲಾಗುತ್ತಿದೆ:

    1. ಮುದ್ರಾಂಕ ಶುಲ್ಕ ವಿನಾಯಿತಿ
    2. ನೋಂದಣಿ ಶುಲ್ಕ ರಿಯಾಯಿತಿ.
    3. ಬಂಡವಾಳ ಹೂಡಿಕೆ ಸಹಾಯಧನ
    4. ಕಿರು ಮತ್ತು ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಸಹಾಯಧನ
    5. ಭೂ ಪರಿವರ್ತನಾ ಶುಲ್ಕ ಮರುಪಾವತಿ.
    6. ರಫ್ತು ಆದಾರಿತ ಘಟಕಗಳಿಗೆ ರಿಯಾಯಿತಿ.
    7. ತ್ಯಾಜ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಸಹಾಯಧನ.
    8. ವಿದ್ಯುತ್ ತೆರಿಗೆ ವಿನಾಯಿತಿ
    9. ತಾಂತ್ರಿಕಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ ಸಹಾಯಧನ
    10. ಮಳೆನೀರು ಕೊಯ್ಲು / ಸಂರಕ್ಷಣೆ ಸಹಾಯಧನ
    11. ತಂತ್ರಜ್ಞಾನ ಉನ್ನತೀಕರಣಕ್ಕೆ ಬಡ್ಡಿ ಸಹಾಯಧನ

ಇ) ಕಳೆದ 2 ವರ್ಷಗಳಲ್ಲಿ ರಾಜ್ಯದಲ್ಲಿ ಹೊಸದಾಗಿ ಎಷ್ಟು ಸಣ್ಣ ಕೈಗಾರಿಕೆಗಳು ಸ್ಥಾಪನೆಯಾಗಿವೆ; ಇವುಗಳಿಗೆ ದೊರೆತಿರುವ ಸಾಲ, ಸಹಾಯಧನ ಮತ್ತು ಇತರೆ ಸೌಲಭ್ಯಗಳ ವಿವರ ನೀಡುವುದು;

ಕಳೆದ 2 ವರ್ಷಗಳಲ್ಲಿ ರಾಜ್ಯದಲ್ಲಿ ಹೊಸದಾಗಿ ಪ್ರಾರಂಭವಾದ ಸಣ್ಣ ಕೈಗಾರಿಕೆಗಳು ಮತ್ತು ಅವುಗಳಿಗೆ ದೊರೆತಿರುವ ಸಾಲ, ಸಹಾಯಧನ ಮತ್ತು ಇತರೆಸೌಲಭ್ಯಗಳ ವಿವರಗಳು ಈ ಕೆಳಗಿನಂತಿವೆ:

| ಅವಧಿ | 2021-22 | | 2022-23 | |
|---|---|---|---|---|
| | ಘಟಕಗಳ ಸಂಖ್ಯೆ | ರೂ. ಲಕ್ಷಗಳಲ್ಲಿ | ಘಟಕಗಳ ಸಂಖ್ಯೆ | ರೂ. ಲಕ್ಷಗಳಲ್ಲಿ |
| ಕೈಗಾರಿಕಾ ನೀತಿ-ಸಹಾಯಧನ | 994 | 10,783.28 | 996 | 44,750.79 |
| ಕೃಷಿ ನೀತಿ-ಸಹಾಯಧನ | 396 | 13,348.92 | - | - |
| ಕೆ.ಎಸ್.ಎಫ್.ಸಿ - ಸಾಲ | 213 | 24,502.07 | 287 | 36,698.44 |
| ಪ್ರಧಾನಮಂತ್ರಿ ಉದ್ಯೋಗ ಸೃಜನೆ ಯೋಜನೆ | 5864 | 15,774.02 | 5612 | 16,106.92 |

| | | | | | | |
|---|---|---|---|---|---|---|
| | | ವಿ.ಘ.ಯೋ/ಗಿ.ಉ.ಯೋ-60:40 ಸಹಾಯಧನ | 336 | 1,206.72 | 191 | 734.20 |
| | | ವಿ.ಘ.ಯೋ/ಗಿ.ಉ.ಯೋ-ಸಾಫ್ಟ್ ಸೀಡ್ ಕ್ಯಾಪಿಟಲ್ | 42 | 833.22 | 93 | 2,590.63 |
| | | **ಒಟ್ಟು** | **7845** | **66,448.22** | **7179** | **1,00,880.98** |

ಈ) ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಮಹಿಳಾ ಉದ್ದಿಮೆದಾರರಿಗೆ ಸರ್ಕಾರದಿಂದ ದೊರೆಯುವ ಹೆಚ್ಚುವರಿ ಮತ್ತು ವಿಶೇಷ ಸವಲತ್ತುಗಳು ಯಾವುವು?

ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಮಹಿಳಾ ಉದ್ದಿಮೆದಾರರಿಗೆ ಸರ್ಕಾರದಿಂದ ದೊರೆಯುವ ಹೆಚ್ಚುವರಿ ಮತ್ತು ವಿಶೇಷ ಸವಲತ್ತುಗಳು ಈ ಕೆಳಗಿನಂತಿರುತ್ತವೆ:

**ಪ್ರಧಾನಮಂತ್ರಿಯವರ ಉದ್ಯೋಗ ಸೃಜನೆ ಯೋಜನೆ:**

| **ಯೋಜನಾ ವೆಚ್ಚದಲ್ಲಿ ಪ್ರವರ್ತಕರ ವಂತಿಗೆ** | **ಯೋಜನಾ ವೆಚ್ಚದ ಮೇಲೆ ಅರ್ಹತೆಯಿರುವ ಸಹಾಯಧನ** | |
|---|---|---|
| | ನಗರ | ಗ್ರಾಮೀಣ |
| ಶೇ.5% | ಶೇ.25% (ಗರಿಷ್ಟ ರೂ.12.50 ಲಕ್ಷ) | ಶೇ.35% (ಗರಿಷ್ಟ ರೂ.17.50 ಲಕ್ಷ) |

**ಕೈಗಾರಿಕಾ ನೀತಿ-2020-25:**

| | |
|---|---|
| ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳಿಗೆ ಹೂಡಿಕೆಉತ್ತೇಜನಾ ಸಹಾಯಧನ | **ಸೂಕ್ಷ್ಮ ಕೈಗಾರಿಕೆಗಳು**<br>ವಲಯ 1: ವಿಎಫ್ಎ ಯ 35% (ಗರಿಷ್ಟ ರೂ.30 ಲಕ್ಷ)<br>ವಲಯ 2: ವಿಎಫ್ಎ ಯ 30% (ಗರಿಷ್ಟ ರೂ.25 ಲಕ್ಷ)<br>ವಲಯ 3: ವಿಎಫ್ಎ ನ 10% (ಗರಿಷ್ಟ ರೂ.10 ಲಕ್ಷ)<br>ಸಣ್ಣ ಕೈಗಾರಿಕೆಗಳು<br>ವಲಯ 1:ವಿಎಫ್ಎ ಯ 30%(ಗರಿಷ್ಟ ರೂ.105 ಲಕ್ಷ)<br>ವಲಯ 2: ವಿಎಫ್ಎ ಯ 25% (ಗರಿಷ್ಟ ರೂ.95 ಲಕ್ಷ)<br>ವಲಯ 3: ವಿಎಫ್ಎ ನ 10% (ಗರಿಷ್ಟ ರೂ.25 ಲಕ್ಷ) |
| ಎಂಎಸ್ಎಂಇ ಗಳಿಗೆ ಸ್ಟ್ಯಾಂಪ್ ಶುಲ್ಕ(ಡ್ಯೂಟಿ) ವಿನಾಯಿತಿ | ವಲಯ 1 : 100%<br>ವಲಯ 2 : 100%<br>ವಲಯ 3 : 75% |

| | | | |
|---|---|---|---|
| | | ಎಂಎಸ್ಎಂಇಗಳಿಗೆ ನೋಂದಣಿ ಶುಲ್ಕದಲ್ಲಿ ರಿಯಾಯಿತಿ | ಎಲ್ಲಾ ವಲಯಗಳಿಗೆ :ರೂ.1000/-ಕ್ಕೆ ರೂ.1/- |
| | | ಎಂಎಸ್ಎಂಇ ಗಳಿಗೆ ಭೂ ಪರಿವರ್ತನಾ ಶುಲ್ಕ ಮರುಪಾವತಿ | ವಲಯ 1 : 100%<br>ವಲಯ 2 : 100%<br>ವಲಯ 3 : 75% |
| | | ಎಂಎಸ್ಎಂಇ ಗಳಿಗೆ ವಿದ್ಯುತ್ ಶುಲ್ಕದ ಮೇಲಿನ ತೆರಿಗೆ ವಿನಾಯಿತಿ | ವಲಯ 1 : 100% 8 ವರ್ಷದವರೆಗೆ<br>ವಲಯ 2 : 100% 7 ವರ್ಷದವರೆಗೆ<br>ವಲಯ 3 : 100% 4 ವರ್ಷದವರೆಗೆ |

ಸಿಐ 142 ಎಸ್ಎಸ್ಐ 2023

(ಶರಣಬಸಪ್ಪ ದರ್ಶನಾಪೂರ)
ಸಣ್ಣ ಕೈಗಾರಿಕೆ ಮತ್ತು
ಸಾರ್ವಜನಿಕ ಉದ್ದಿಮೆ ಸಚಿವರು